# ಕರ್ನಾಟಕ ವಿಧಾನ ಪರಿಷತ್ತು

ನೂರ ಐವತ್ತೆಂಟನೆಯ ಅಧಿವೇಶನ
(ಮುಂದುವರೆದ ಉಪವೇಶನಗಳು)

**ಕಾರ್ಯಕಲಾಪಗಳ ಪಟ್ಟಿ**

ಬುಧವಾರ, ದಿನಾಂಕ:11ನೇ ಮಾರ್ಚ್, 2026

**(ಸಮಯ: ಬೆಳಗ್ಗೆ: 11.00 ಗಂಟೆಗೆ)**

*****

## 1. ಪ್ರಶ್ನೋತ್ತರ

ಅ) ಸದನದಲ್ಲಿ ಉತ್ತರಿಸುವ ಪ್ರಶ್ನೆಗಳು : ಏಳನೇ ಪಟ್ಟಿ

ಆ) ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆಗಳು : ಏಳನೇ ಪಟ್ಟಿ

## 2. ಶೂನ್ಯವೇಳೆ ಪ್ರಸ್ತಾವಗಳು

## 3. ಗಮನ ಸೆಳೆಯುವ ಸೂಚನೆಗಳು

1. **ಶ್ರೀ ತಿಪ್ಪಣ್ಣಪ್ಪ ಕಮಕನೂರ ಹಾಗೂ ಡಾ: ತಳವಾರ್ ಸಾಬಣ್ಣ** ಅವರುಗಳು 'ಕೋಲಿ', 'ಕಬ್ಬಲಿಗ', 'ಬೆಸ್ತ', 'ಅಂಬಿಗ' ಮತ್ತು 'ಬಾರ್ಕಿ' ಪದಗಳನ್ನು ಪರಿಶಿಷ್ಟ ಪಂಗಡದ ಪಟ್ಟಿಗೆ ಸೇರಿಸುವ ಪ್ರಸ್ತಾವನೆಯ ಸ್ಥಿತಿಗತಿಗಳ ಬಗ್ಗೆ **ಮಾನ್ಯ ಮುಖ್ಯಮಂತ್ರಿಗಳ** ಗಮನ ಸೆಳೆಯುವುದು.
2. **ಶ್ರೀ ಹೆಚ್.ಎಸ್. ಗೋಪಿನಾಥ್** ಅವರು ಬೆಂಗಳೂರು ನಗರ ಜಿಲ್ಲೆ ಆನೇಕಲ್ ತಾಲ್ಲೂಕಿನ ಸುತ್ತಮುತ್ತಲ ಕೆರೆಗಳಿಗೆ ನೀರು ತುಂಬಿಸುವ ಕೆ.ಸಿ.ವ್ಯಾಲಿ ಯೋಜನೆಯಡಿ ಕೈಬಿಟ್ಟಿರುವ ಕೆರೆಗಳನ್ನು ಸಾರ್ವಜನಿಕ ಹಿತಾದೃಷ್ಟಿಯಿಂದ ಕೂಡಲೇ ಸೇರಿಸುವ ಬಗ್ಗೆ **ಮಾನ್ಯ ಜಲಸಂಪನ್ಮೂಲ** ಸಚಿವರ ಗಮನ ಸೆಳೆಯುವುದು.

..2

3. **ಶ್ರೀ ಎಸ್.ವ್ಹಿ.ಸಂಕನೂರ** ಅವರು ರಾಜ್ಯದ ಅನುದಾನಿತ ಶಿಕ್ಷಣ ಸಂಸ್ಥೆಯಲ್ಲಿ 2006 ಪೂರ್ವದಲ್ಲಿ ನೇಮಕಗೊಂಡು ನಂತರ ಅನುದಾನಕ್ಕೆ ಒಳಪಟ್ಟಿರುವ ಹಾಗೂ 2006ರ ನಂತರ ನೇಮಕಗೊಂಡ ಸಿಬ್ಬಂದಿಗೆ ಪಿಂಚಣಿ ಸೌಲಭ್ಯ ಸಿಗದೆ ಆರ್ಥಿಕ ಸಂಕಷ್ಟಕ್ಕೆ ಒಳಗಾಗಿರುವ ಬಗ್ಗೆ **ಮಾನ್ಯ ಶಾಲಾ ಶಿಕ್ಷಣ ಮತ್ತು ಸಾಕ್ಷರತಾ** ಸಚಿವರ ಗಮನ ಸೆಳೆಯುವುದು.

4. **ಡಾ. ಧನಂಜಯ ಸರ್ಜಿ** ಅವರು ಮಣ್ಣಿನ ಆರೋಗ್ಯ ಕಾರ್ಡ್ ಯೋಜನೆಯನ್ನು ಪರಿಣಾಮಕಾರಿಯಾಗಿ ಕಡ್ಡಾಯಗೊಳಿಸುವ ಮೂಲಕ ಮಣ್ಣಿನ ಆರೋಗ್ಯ ತಿಳಿಯದೇ ಅವೈಜ್ಞಾನಿಕವಾಗಿ ಮತ್ತು ಯಥೇಚ್ಛವಾಗಿ ರಾಸಾಯಿನಿಕ ರಸಗೊಬ್ಬರಗಳ ಬಳಕೆಯಿಂದ ನೀರಿನ ಮೂಲಗಳು-ನದಿಗಳು ಕಲುಷಿತಗೊಂಡು ಕ್ಯಾನ್ಸರ್‌ನಂತಹ ಮಾರಕ ಕಾಯಿಲೆಗಳಿಗೆ ಕಾರಣವಾಗುತ್ತಿರುವುದನ್ನು ತಡೆಗಟ್ಟುವ ಬಗ್ಗೆ **ಮಾನ್ಯ ಕೃಷಿ ಸಚಿವರ** ಗಮನ ಸೆಳೆಯುವುದು.

## 4. ನಿಯಮ 330ರ ಮೇರೆಗೆ

1. **ಮಾನ್ಯ ವಿರೋಧ ಪಕ್ಷದ ನಾಯಕರಾದ ಶ್ರೀ ಛಲವಾದಿ ಟಿ. ನಾರಾಯಣಸ್ವಾಮಿ, ಮಾನ್ಯ ವಿರೋಧ ಪಕ್ಷದ ಮುಖ್ಯ ಸಚೇತಕರಾದ ಶ್ರೀ ಎನ್. ರವಿಕುಮಾರ್, ಮಾನ್ಯ ಶಾಸಕರುಗಳಾದ ಶ್ರೀ ಶಶಿಲ್ ಜಿ. ನಮೋಶಿ, ಶ್ರೀಮತಿ ಭಾರತಿ ಶೆಟ್ಟಿ, ಶ್ರೀ ಶರವಣ ಟಿ.ಎ. ಶ್ರೀ ಸಿ.ಟಿ. ರವಿ ಹಾಗೂ ಇತರರು** ರಾಜ್ಯದಲ್ಲಿ ವಿವಿಧ ಇಲಾಖೆಗಳು, ವಿಶ್ವವಿದ್ಯಾಲಯಗಳು ಹಾಗೂ ನಿಗಮ/ಮಂಡಳಿಗಳಲ್ಲಿ ಖಾಲಿಯಿರುವ ಹುದ್ದೆಗಳನ್ನು ಭರ್ತಿ ಮಾಡುವಲ್ಲಿ ವಿಳಂಬವಾಗುತ್ತಿರುವ ಕುರಿತು ಪ್ರಸ್ತಾಪಿಸುವುದು **(ಮಾನ್ಯ ಮುಖ್ಯಮಂತ್ರಿಗಳು)**

2. **ಶ್ರೀ ಕೇಶವ ಪ್ರಸಾದ್. ಎಸ್** ಅವರು ಕೋಲಾರ ಜಿಲ್ಲೆಯ ಮಾಲೂರು ತಾಲ್ಲೂಕು ಟೇಕಲ್ ಹೋಬಳಿ, ಅಗಲಕೋಟೆ ಗ್ರಾಮದಲ್ಲಿ ಶಿಕ್ಷಣ ಇಲಾಖೆಗೆ ದಾನವಾಗಿ ನೀಡಲಾದ ಭೂಮಿಯ ಅತಿಕ್ರಮಣ ಹಾಗೂ ದಾಖಲೆಯ ವಂಚನೆ ಕುರಿತು ಪ್ರಸ್ತಾಪಿಸುವುದು. **(ಮಾನ್ಯ ಕಂದಾಯ ಸಚಿವರು)**

3. **ಡಾ: ತಳವಾರ್ ಸಾಬಣ್ಣ** ಅವರು ಹಿಂದುಳಿದ ವರ್ಗಗಳಲ್ಲಿ ಬರುವ ಜಾತಿಗಳ ಕುಲ ಕಸಬುಗಳು ನಶಿಸುತ್ತಿರುವುದರಿಂದ ಅವುಗಳನ್ನು ಉತ್ತೇಜಿಸಿ ಆರ್ಥಿಕ ಭದ್ರತೆ ಕಲ್ಪಿಸುವ ಕುರಿತು ಪ್ರಸ್ತಾಪಿಸುವುದು. **(ಮಾನ್ಯ ಹಿಂದುಳಿದ ವರ್ಗಗಳ ಕಲ್ಯಾಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು)**

4. **ಶ್ರೀಯುತರುಗಳಾದ ಸೂರಜ್ ರೇವಣ್ಣ, ನಿರಾಣಿ ಹಣಮಂತ ರುದ್ರಪ್ಪ, ಎಸ್.ಎಲ್. ಭೋಜೇಗೌಡ, ನವೀನ್ ಕೆ.ಎಸ್. ಮತ್ತು ಪ್ರದೀಪ್ ಶೆಟ್ಟರ್** ಅವರುಗಳು ರಾಜ್ಯದ ಬಯಲುನಾಡಿನ ಜಿಲ್ಲೆಗಳಾದ ತುಮಕೂರು, ರಾಮನಗರ, ಬೆಂಗಳೂರು ಗ್ರಾಮಾಂತರ, ಕೋಲಾರ ಹಾಗೂ ಚಿಕ್ಕಬಳ್ಳಾಪುರ ಜಿಲ್ಲೆಗಳಿಗೆ ಕುಡಿಯುವ ನೀರನ್ನು ಪೂರೈಸುವ ವಿಚಾರ ಕುರಿತು ಪ್ರಸ್ತಾಪಿಸುವುದು. **(ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್‌ರಾಜ್ ಸಚಿವರು)**

5. **ಶ್ರೀಮತಿ ಹೇಮಲತಾ ನಾಯಕ** ಅವರು ಕೊಪ್ಪಳ ನಗರದ ಹುಲಿಕೆರೆಯ ಮೂಲ ಪ್ರದೇಶ ಹಾಗೂ ಸುತ್ತಮುತ್ತಲಿನ ಬಫರ್ ಜೋನ್ ಪ್ರದೇಶದ ಅತಿಕ್ರಮಣ ತಡೆಗಟ್ಟಲು ಮರುಅಳತೆ ಮಾಡಿಸಿ ನಿಖರ ಗಡಿ ಗುರುತಿಸುವುದು ಮತ್ತು ಅತಿಕ್ರಮಣ ಕುರಿತು ಸಮಗ್ರ ವರದಿ ಸಿದ್ಧಪಡಿಸಿ ತಪ್ಪಿತಸ್ಥರ ವಿರುದ್ಧ ಕ್ರಮ ಜರುಗಿಸುವ ಕುರಿತು ಪ್ರಸ್ತಾಪಿಸುವುದು. **(ಮಾನ್ಯ ಪೌರಾಡಳಿತ ಮತ್ತು ಹಜ್ ಸಚಿವರು)**

## 5. ವಿತ್ತೀಯ ಕಾರ್ಯಕಲಾಪ

2026-27ನೇ ಸಾಲಿನ ಆಯವ್ಯಯ ಅಂದಾಜುಗಳ ಮೇಲಿನ ಸಾಮಾನ್ಯ ಚರ್ಚೆ
(ಎರಡನೇ ದಿನ)

ಕೆ.ಆರ್. ಮಹಾಲಕ್ಷ್ಮಿ
ಕಾರ್ಯದರ್ಶಿ

---

ಪ್ರತಿ ದಿನದ ವಿಧಾನ ಪರಿಷತ್ತಿನ ಕಾರ್ಯಕಲಾಪಗಳ ಪಟ್ಟಿಯನ್ನು ವೆಬ್‌ಸೈಟ್‌ನಲ್ಲಿಯೂ ಸಹ ಪಡೆದುಕೊಳ್ಳಬಹುದು.
www.kla.kar.nic.in/council/council.htm